ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಆಗಸ್ಟ್ 1, 2020

# ಪತ್ರಿಕಾ ಆಮಂತ್ರಣ

ಸಾರ್ವಜನಿಕ ಗ್ರಂಥಾಲಯ ನೂತನ ಕಟ್ಟಡ ಉದ್ಘಾಟನೆ :

ಎಸ್. ಸುರೇಶ್‌ಕುಮಾರ್,

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ದಿನಾಂಕ : 03–08–2020 ಸೋಮವಾರ ಸಮಯ : ಬೆಳಿಗ್ಗೆ 10–30 ಗಂಟೆಗೆ

ಸ್ಥಳ : ಸಿ.ಎ. ನಿವೇಶನ ಸಂಖ್ಯೆ 10, 10 ನೇ ಅಡ್ಡರಸ್ತೆ, 2 ನೇ ಹಂತ, ಬಿ.ಟಿ.ಎಂ. ಬಡಾವಣೆ , ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಶಿಕ್ಷಕರ ವರ್ಗಾವಣೆ

ಬೆಂಗಳೂರು, ಆಗಸ್ಟ್ 1 (ಕರ್ನಾಟಕ ವಾರ್ತೆ)

**ಬಹು ನಿರೀಕ್ಷಿತ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಗಳನ್ನು ಆಗಸ್ಟ್ 15 ರೊಳಗೆ ಪ್ರಾರಂಭಿಸಬೇಕೆಂದು ಶಿಕ್ಷಣ ಸಚಿವ ಸುರೇಶ್ ಕುಮಾರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.**

**ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಶುಕ್ರವಾರ ಚರ್ಚೆ ನಡೆಸಿದ ಬಳಿಕ ಶಿಕ್ಷಕ ಸಮುದಾಯವು ಬಹುದಿನಗಳಿಂದ ವರ್ಗಾವಣೆ ಪ್ರಕ್ರಿಯೆಗೆ ಚಾಲನೆಯನ್ನು ನಿರೀಕ್ಷಿಸುತ್ತಿದೆ. ಆದಕಾರಣ, ಎಲ್ಲ ತಾಂತ್ರಿಕ ಸಿದ್ಧತೆಗಳನ್ನು ಕೂಡಲೇ ಪೂರ್ಣಗೊಳಿಸಿಕೊಂಡು ವರ್ಗಾವಣೆ ಪ್ರಕ್ರಿಯೆಗೆ ಶೀಘ್ರ ಚಾಲನೆ ನೀಡಬೇಕೆಂದು ಸಚಿವರು ಸೂಚಿಸಿದ್ದಾರೆ.**

ಕಳೆದ ಸಾಲಿನಲ್ಲಿ ಕಡ್ಡಾಯ ಹಾಗೂ ಹೆಚ್ಚುವರಿ ವರ್ಗಾವಣೆಯ ಶಿಕ್ಷೆಗೆ ಒಳಗಾಗಿದ್ದ ಶಿಕ್ಷಕ ಸಮುದಾಯಕ್ಕೆ ಈ ಸಾಲಿನ ವರ್ಗಾವಣಾ ಪ್ರಕ್ರಿಯೆಯಲ್ಲಿ ಮೊದಲ ಆದ್ಯತೆಯ ವರ್ಗಾವಣೆಯನ್ನು ನೀಡಿ ಅನುಕೂಲ ಮಾಡಿಕೊಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಸಚಿವರು ಶೀಘ್ರ ವರ್ಗಾವಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಇಲಾಖೆಯ ಅಧಿಕಾರಿಗಳಿಗೆ ತಾಕೀತು ಮಾಡಿದರು.

## ಭಾನುವಾರವೂ ಬನ್ನೇರುಘಟ್ಟ ಜೈವಿಕ ಉದ್ಯಾನವನ ಸಾರ್ವಜನಿಕರಿಗೆ ಮುಕ್ತ

ಬೆಂಗಳೂರು, ಆಗಸ್ಟ್ 1 (ಕರ್ನಾಟಕ ವಾರ್ತೆ)

ಕೋವಿಡ್ –19 ಕರೋನಾ ವೈರಾಣು ಹರಡುವಿಕೆ ತಡೆಗಟ್ಟುವ ನಿಟ್ಟಿನಲ್ಲಿ ಜುಲೈ 2020 ಮಾಹೆಯ ಭಾನುವಾರಗಳಂದು ಸಂಪೂರ್ಣ ಲಾಡ್‌ಡೌನ್ ಮಾಡಲು ಸರ್ಕಾರ ಈ ಹಿಂದೆ ನಿರ್ಧರಿಸಿದ್ದರಿಂದ ಪ್ರತಿ ಭಾನುವಾರ ಬನ್ನೇರುಘಟ್ಟ ಜೈವಿಕ ಉದ್ಯಾನವನಕ್ಕೆ ರಜೆ ಘೋಷಿಸಿ ಪ್ರತಿ ಮಂಗಳವಾರ ವೀಕ್ಷಣೆಗೆ ತೆರೆಯಲಾಗಿತ್ತು.

ಪ್ರಸ್ತುತ ಭಾನುವಾರದ ಲಾಕ್ ಡೌನ್ ಅಂತ್ಯಗೊಂಡಿರುವ ಹಿನ್ನೆಲೆಯಲ್ಲಿ ಇನ್ನು ಮುಂದೆ ಯಥಾಸ್ಥಿತಿಯಂತೆ ಪ್ರತಿ ಭಾನುವಾರಗಳಂದು ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸಿ ಮಂಗಳವಾರಗಳನ್ನು ಸಾರ್ವಜನಿಕರ ವೀಕ್ಷಣೆಗೆ ಮುಚ್ಚಲಾಗುತ್ತದೆ ಎಂದು ಕಾರ್ಯನಿರ್ವಾಹಕ ನಿರ್ದೇಶಕರು, ಬನ್ನೇರುಘಟ್ಟ ಜೈವಿಕ ಉದ್ಯಾನವನ, ಬನ್ನೇರುಘಟ್ಟ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## Bannerghatta Biological Park will remain opened for visitors on Sundays

Bengaluru, August 1 (Karnataka Information)

State Government has taken decision to Lockdown on every Sundays in the month of July, 2020 to prevent spreading of COVID-19. However government withdrawn the Sunday lockdown from 1st of August, 2020. I view of this, this to notify the public that Bannerghatta Biological Park will remain opened for visitors on Sundays and closed on Tuesdays says official press release.

## ಸಚಿವರ ಪ್ರವಾಸ

**ಬೆಂಗಳೂರು, ಆಗಸ್ಟ್ 1 (ಕರ್ನಾಟಕ ವಾರ್ತೆ)**

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಕೆ. ಗೋಪಾಲಯ್ಯ ಅವರು ಆಗಸ್ಟ್ 3 ರಂದು ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ಮಧ್ಯಾಹ್ನ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮೈಸೂರು ಮೃಗಾಲಯ ಭಾನುವಾರ ಸಾರ್ವಜನಿಕರಿಗೆ ಮುಕ್ತ

**ಬೆಂಗಳೂರು, ಆಗಸ್ಟ್ 1 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿಕೆರೆ ಪ್ರಕೃತಿ ಉದ್ಯಾನವನದ ವೀಕ್ಷಣೆಗೆ ಭಾನುವಾರಗಳಂದು ತೆರೆಯಲಾಗುವುದು. ಇನ್ನು ಮುಂದೆ ಪ್ರತಿ ಮಂಗಳವಾರ ವಾರದ ರಜೆಯಾಗಿರುತ್ತದೆ ಎಂದು ಮೃಗಾಲಯದ ಅಧಿಕೃತ ಪ್ರಕಟಣೆ ತಿಳಿಸಿದೆ.